**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆಯ ನಡವಳಿಗಳು**

ವಿಷಯ: ನ್ಯಾಕ್ ಪ್ರಕ್ರಿಯೆಯ ಪೀರ್ ತಂಡದ ಭೇಟಿ ನಿರೀಕ್ಷೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರಿ ಅನುದಾನ ಬಿಡುಗಡೆ ಆದೇಶ ಸಂಖ್ಯೆ ಇಡಿ/47/ಹೆಚ್‌ಪಿಸಿ/2017, ಬೆಂಗಳೂರು ದಿನಾಂಕ: 06.07.2017.
2. ಇಲಾಖೆಯ ನ್ಯಾಕ್ ಮತ್ತು ರಾಜ್ಯ ಗುಣಮಟ್ಟ ಭರವಸಾ ಕೋಶದ ಸಮನ್ವಯಾಧಿಕಾರಿಗಳ ಸಲ್ಲಿಕೆ ದಿನಾಂಕ: 31.07.2017.

**********

**ಪ್ರಸ್ತಾವನೆ:**

ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ನ್ಯಾಕ್ ಮೌಲ್ಯಮಾಪನ ಮತ್ತು ಮರು ಮೌಲ್ಯಮಾಪನಕ್ಕೆ ಒಳಪಡುವುದು ಅವಶ್ಯವಿರುವ ಹಿನ್ನೆಲೆಯಲ್ಲಿ ಮಾನ್ಯತೆಯ ಒಂದು ಹಂತವಾದ ಪೀರ್ ಟೀಮ್ ಭೇಟಿ ನಿರೀಕ್ಷೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನವನ್ನು ಉಲ್ಲೇಖ(1) ರ ಸರ್ಕಾರಿ ಆದೇಶದಲ್ಲಿ ಇಲಾಖೆಗೆ 2017-18 ರ ಸಾಲಿನಲ್ಲಿ **"ರಾಷ್ಟ್ರೀಯ ಅಂಗೀಕೃತ ಪರಿಷತ್ತು"** ಕಾರ್ಯಕ್ರಮದಡಿಯಲ್ಲಿ ಲೆಕ್ಕಶೀರ್ಷಿಕೆ 2202-03-112-0-09-059(ಯೋ) ರಲ್ಲಿ ಒದಗಿಸಲಾಗಿರುತ್ತದೆ. ಸದರಿ ಅನುದಾನದ ಮಿತಿಯೊಳಗೆ ಗುರುತಿಸಲಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪೀರ್ ತಂಡದ ಭೇಟಿ ವೆಚ್ಚಕ್ಕಾಗಿ ಅನುದಾನ ಬಿಡುಗಡೆ ಮಾಡಲು ಈ ಆದೇಶ.

**ಆದೇಶ ಸಂಖ್ಯೆ:ಕಾಶಿಇ/06/ ನ್ಯಾಕ್.ಅಬಿ/2017-18, ಬೆಂಗಳೂರು ದಿ:09.08.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ನ್ಯಾಕ್ ಮಾನ್ಯತೆಗಾಗಿ ಮೌಲ್ಯಮಾಪನ ಮತ್ತು ಮರು ಮೌಲ್ಯಮಾಪನಕ್ಕೆ ಒಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಪೀರ್ ತಂಡದ ವೆಚ್ಚ ಭರಿಸಲು ಅನುದಾನವನ್ನು **"ರಾಷ್ಟ್ರೀಯ ಅಂಗೀಕೃತ ಪರಿಷತ್ತು"** ಕಾರ್ಯಕ್ರಮದಡಿಯಲ್ಲಿ ಲೆಕ್ಕಶೀರ್ಷಿಕೆ **2202-03-112-0-09-059(ಯೋ)** ರಡಿಯಲ್ಲಿ ಒದಗಿಸಿರುವ ಅನುದಾನದ ಮಿತಿಯೊಳಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ ಹಾಗೂ ಸದರಿ ಅನುದಾನವನ್ನು ನಿಯಮಾನುಸಾರ ಬಳಸಿಕೊಳ್ಳಲು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅನುಮತಿ ನೀಡಲಾಗಿದೆ.

| ಕ್ರ.ಸಂ | ಕಾಲೇಜಿನ ಹೆಸರು | ಅನುದಾನ ಮೊತ್ತ ರೂ ಗಳಲ್ಲಿ |
|---|---|---|
| 1 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಕ್ಕನಾಯಕನಹಳ್ಳಿ-572214 | 200000 |
| 2 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಂಗಾರಪೇಟೆ - 563 114 | 200000 |
| 3 | ಬಾಲಕಿಯರ ಸರ್ಕಾರಿ ಕಾಲೇಜು, ಚಿಂತಾಮಣಿ - 563 125 | 100000 |
| 4 | ಸರ್.ಎಂ.ವಿ.ಸರ್ಕಾರಿ ಕಲೆ ಮತ್ತು ವಾಣಿಜ್ಯ ಕಾಲೇಜು, ನ್ಯೂಟೌನ್ ಭದ್ರಾವತಿ | 100000 |
| 5 | ಐ .ಡಿ .ಎಸ್.ಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಕ್ಕಮಗಳೂರು - 577 102 | 100000 |

ಆದೇಶ ಸಂಖ್ಯೆ:ಕಾಶಿಇ/06/ ನ್ಯಾಕ್.ಅಬಿ/2017-18, ಬೆಂಗಳೂರು

| | | |
|---|---|---|
| 6 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬೆಟ್ಟಂಪಾಡಿ - 574 259 ಪುತ್ತೂರು ತಾ॥, ದಕ್ಷಿಣ ಕನ್ನಡ ಜಿಲ್ಲೆ | 200000 |
| 7 | ಮಂಜುನಾಥ ಪೈ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಾರ್ಕಳ - 574 104 | 100000 |
| 8 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗದಗ್ -582201 | 200000 |
| 9 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಯಾದಗಿರಿ, ಯಾದಗಿರಿ ಜಿಲ್ಲೆ - 585 202 | 100000 |
| 10 | ಶ್ರೀಮತಿ ಸರಳಾದೇವಿ ಸತೀಶ್ ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಳ್ಳಾರಿ - 583 101 | 100000 |
| | ಒಟ್ಟು ಅನುದಾನ ರೂ | 14,00,000 |
| | (ರೂಪಾಯಿ ಹದಿನಾಲ್ಕು ಲಕ್ಷಗಳು ಮಾತ್ರ) | |

<u>ಷರತ್ತುಗಳು:-</u>

1. ಖರೀದಿಗಳಿಗೆ ಸಂಬಂಧಿಸಿದಂತೆ ಎಲ್ಲಾ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧ್ಯಾದೇಶ 2000ರ (ಕೆ.ಟಿ.ಪಿ.ಪಿ) ಮತ್ತು ಅದರಡಿಯಲ್ಲಿ ನಿಯಮಗಳನ್ನು ಚಾಚು ತಪ್ಪದೇ ಕಡ್ಡಾಯವಾಗಿ ಹಾಗೂ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
2. ಈ ವೆಚ್ಚವನ್ನು 2018ರ ಮಾರ್ಚ್ ಮಾಹೆಯೊಳಗೆ ಎಲ್ಲಾ ಪ್ರಚಲಿತ ನಿಯಮಗಳನ್ನು ಪಾಲಿಸಿ ಭರಿಸುವುದು.
3. ಪೀರ್ ಟೀಮ್ ಭೇಟಿಗಾಗಿ ಬಿಡುಗಡೆ ಮಾಡಿದ ಅನುದಾನವನ್ನು ಪರಿಣಿತರ ತಂಡದ ಪ್ರಯಾಣ ವೆಚ್ಚ, ಆತಿಥ್ಯ, ಲೇಖನಾ ಸಾಮಗ್ರಿ,, ವಾಹನ ಬಾಡಿಗೆ ಹಾಗೂ ಭೇಟಿ ಸನ್ನಿವೇಶಗಳ ಪೂರ್ಣ ವಿಡಿಯೋ ಚಿತ್ರೀಕರಣ ಪ್ರಕ್ರಿಯೆಗಳಿಗಾಗಿ ಬಳಸತಕ್ಕದ್ದು.
4. ಪೀರ್ ಟೀಮ್ ಭೇಟಿಗಾಗಿ ಬಿಡುಗಡೆ ಮಾಡಿದ ಅನುದಾನದ ಅಗತ್ಯ ವೆಚ್ಚದ ವಿವರಗಳ ಕ್ರೋಢೀಕೃತ ಮಾಹಿತಿಯನ್ನು ಪೀರ್ ಟೀಮ್ ಭೇಟಿ ಪೂರ್ಣಗೊಂಡ ಒಂದು ತಿಂಗಳೊಳಗಾಗಿ ಈ ಕಛೇರಿಗೆ ಸಲ್ಲಿಸತಕ್ಕದ್ದು.
5. ಈ ಅನುದಾನವನ್ನು ನ್ಯಾಕ್ ಮೌಲ್ಯಮಾಪನ ಪ್ರಕ್ರಿಯೆಗಳಿಗೆ ಮಾತ್ರ ಬಳಸತಕ್ಕದ್ದು.
6. ಬಿಡುಗಡೆ ಮಾಡಲಾದ ಅನುದಾನದ ಖರ್ಚು-ವೆಚ್ಚಗಳನ್ನು ಲೆಕ್ಕ ತಪಾಸಣೆಗೆ ಒಳಪಡಿಸತಕ್ಕದ್ದು.
7. ಬಿಡುಗಡೆ ಮಾಡಲಾದ ಅನುದಾನದ ಬಳಕೆಯ ಬಗ್ಗೆ ಕರ್ನಾಟಕ ಆರ್ಥಿಕ ಸಂಹಿತೆ, ನಿಯಮ 161 ರನ್ವಯ ನಿಗದಿತ ನಮೂನೆಯಲ್ಲಿಯೇ "ಹಣ ಬಳಕೆಯ ಪ್ರಮಾಣ ಪತ್ರ" ಗಳನ್ನು ಸಿದ್ಧಪಡಿಸಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಮೇಲು ಸಹಿಯೊಂದಿಗೆ ಕಡ್ಡಾಯವಾಗಿ 2018ರ ಏಪ್ರಿಲ್ ಮಾಹೆಯ ಅಂತ್ಯದೊಳಗೆ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿ, ಬಿಡುಗಡೆಯಾದ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳುವಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಹಾಗೂ ಈ ಷರತ್ತುಗಳು ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

*"ಮಾನ್ಯ ಆಯುಕ್ತರಿಂದ ಕರಡು ಅನುಮೋದಿಸಲ್ಪಟ್ಟಿದೆ"*

**ಕಾಲೇಜು ಶಿಕ್ಷಣ ನಿರ್ದೇಶಕರು**

<u>ಇವರಿಗೆ:</u>

1. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಗುಲ್ಬರ್ಗಾ ಮತ್ತು ಧಾರವಾಡ ಮಾಹಿತಿ ಹಾಗೂ ತಮ್ಮ ವ್ಯಾಪ್ತಿಯ ಕಾಲೇಜುಗಳ ಪೀರ್ ತಂಡದ ಭೇಟಿ ದಿನದಂದು ಕಾಲೇಜಿನಲ್ಲಿ ಉಪಸ್ಥಿತರಿರಲು ಸೂಚಿಸಲಾಗಿದೆ.
3. ಖಜಾನಾಧಿಕಾರಿಗಳು, ರಾಜ್ಯ ಹುಜೂರ್‌ಖಜಾನೆ, ಬೆಂಗಳೂರು.
4. ಲೆಕ್ಕಾಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
5. ಸಮನ್ವಯಾಧಿಕಾರಿಗಳು-ರಾಜ್ಯ ಗುಣಮಟ್ಟ ಭರವಸಾ ಕೋಶ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
6. ಮ್ಯಾನೇಜರ್/ಅಧೀಕ್ಷಕರು, ಯೋಜನಾ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು..
7. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಈ ಆದೇಶವನ್ನು ಇಲಾಖೆಯ ವೆಬ್-ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
8. ಕಛೇರಿ ಪ್ರತಿ.